## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2012-13ನೇ ಸಾಲಿನಲ್ಲಿ ಮಂಜೂರಾಗಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, (ಹಿಂದುಳಿದ ವರ್ಗ) ಹನುಮನಾಳ ಹೋಬಳಿ, ಕುಷ್ಟಗಿ ತಾ|| ಕೊಪ್ಪಳ ಜಿಲ್ಲೆ ವಸತಿ ಶಾಲೆಗೆ ಹುದ್ದೆಗಳನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 335 ಬಿಎಂಎಸ್ 2012 ದಿನಾಂಕ:21.11.2012.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರ ಪ್ರಸ್ತಾವನೆ ಸಂಖ್ಯೆ:ಕವಶಿಸಸ/ಆಡಳಿತ(ಬಿಸಿ)ಸಿಆರ್-71/2017-18, ದಿನಾಂಕ:14.07.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಉತ್ತರ ಕರ್ನಾಟಕದ ಜಿಲ್ಲೆಗಳ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಅನುಕೂಲಕ್ಕಾಗಿ 12 ಕಿತ್ತೂರು ರಾಣಿ ಚೆನ್ನಮ್ಮ ಬಾಲಕಿಯರ ವಸತಿ ಶಾಲೆಗಳು, 15 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ 08 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳನ್ನು 2013-14ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಪ್ರಸ್ತಾವನೆಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರು 2012-13ನೇ ಸಾಲಿನಲ್ಲಿ ಮಂಜೂರಾತಿ ಮಾಡಿರುವ 26 ಹಿಂದುಳಿದ ವರ್ಗದ ವಸತಿ ಶಾಲೆಗಳ ಪೈಕಿ ಹನುಮನಾಳ ಹೋಬಳಿ, ಕುಷ್ಟಗಿ ತಾ|| ಕೊಪ್ಪಳ ಜಿಲ್ಲೆ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಅವಶ್ಯಕವಾಗಿ ಬೇಕಾಗಿರುವ ಬೋಧಕ/ ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಿ ವಸತಿ ಶಾಲೆಯನ್ನು ಪ್ರಾರಂಭಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

JD(A)

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 333 ಬಿಎಂಎಸ್ 2022**
**ಬೆಂಗಳೂರು, ದಿನಾಂಕ: 19-01-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹನುಮನಾಳ ಹೋಬಳಿ, ಕುಷ್ಟಗಿ ತಾ|| ಕೊಪ್ಪಳ ಜಿಲ್ಲೆ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ಪ್ರಾರಂಭಿಸಲು ಮೊದಲ ವರ್ಷಕ್ಕೆ ಅಗತ್ಯವಿರುವ ವಿವಿಧ ವೃಂದದ ಈ ಕೆಳಕಂಡ ಒಟ್ಟು 09 ಹುದ್ದೆಗಳನ್ನು ಸೃಜಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

| ಕ್ರ. ಸಂ | ಹುದ್ದೆಯ ವಿವರ | ಆರ್ಥಿಕ ಇಲಾಖೆಯು ಸೃಜಿಸಲು ಸಹಮತಿಸಿದ ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1 | ಪ್ರಾಂಶುಪಾಲರು (For 6-10 std. Group-B scale; for 6-12 std Group –A Scale) | 01 | ನಿಯೋಜನೆ |
| 2 | ಪದವಿಧರ ಕನ್ನಡ ಭಾಷಾ ಶಿಕ್ಷಕರು | 01 | ನೇರ ನೇಮಕಾತಿ |
| 3 | ಪದವೀಧರ ಆಂಗ್ಲ ಭಾಷಾ ಶಿಕ್ಷಕರು | 01 | |
| 4 | ಪದವೀಧರ ಹಿಂದಿ ಭಾಷಾ ಶಿಕ್ಷಕರು | 01 | |
| 5 | ಪದವೀಧರ ಗಣಿತ ಶಿಕ್ಷಕರು | 01 | |

19/01/23

....2

| | | | |
|---|---|---|---|
| 6 | ನಿಲಯ ಪಾಲಕರು | 01 | ನಿಯೋಜನೆ |
| 7 | ಅಡುಗೆಯವರು | 01 | ಹೊರಗುತ್ತಿಗೆ |
| 8 | ಅಡುಗೆ ಸಹಾಯಕರು | 01 | |
| 9 | ಕಾವಲುಗಾರರು | 01 | |
| | **ಒಟ್ಟು** | **09** | |

ಸದರಿ ಹುದ್ದೆಗಳಿಗೆ ತಗುಲುವ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಲೆಕ್ಕಶೀರ್ಷಿಕೆ: 2225-03-277-2-62 (ರಾಜ್ಯವಲಯ ಯೋಜನೆ) ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 721 ವೆಚ್ಚ-3 2022, ದಿನಾಂಕ:16.01.2023 ಹಾಗೂ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

V. Akkamahadevi 19/01/23

**(ವಿ. ಅಕ್ಕಮಹಾದೇವಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3) ವಿಧಾನಸೌಧ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
6. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
3. ಸರ್ಕಾರದ ಉಪ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

********